**CC 1837/2022**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್** 1837/2022

**ಸಿ ಡಬ್ಲೂ** 10
**ಪಿ ಡಬ್ಲೂಃ** 4

| | |
|---|---|
| **ಸಾಕ್ಷಿಯ ಹೆಸರು -** | **ಆಯ್. ಈಶ್ವರಪ್ಪ** |
| **ತಂದೆಯ ಹೆಸರು -** | **ವಿರೂಪಣ್ಣ** |
| **ವಯಸ್ಸು -** | **61 ವರ್ಷಗಳು** |
| **ಉದ್ಯೋಗ -** | **ನಿವೃತ್ತ ಎ ಎಸ್ ಐ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ** 11-09-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎ. ಪಿ. ಪಿ. ಅವರಿಂದ**

ನಾನು ದಿಃ **18-07-2021** ರಿಂದ ದಿಃ **13-09-2022** ವರೆಗೆ ಹೊಸಪೇಟೆ ಪಟ್ಟಣ ಪೋಲಿಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ **02-06-2022** ರಂದು ಬೆಳಿಗ್ಗೆ **07.00** ಗಂಟೆಗೆ ನಾನು ಠಾಣೆಯಲ್ಲಿದ್ದಾಗ ಚಾಸಾ **-1** ರವರು ಗುಡ್ ಮಾರ್ನಿಂಗ್ ಬೀಟ್ ಗೆ ಹೋದಾಗ ಮೀರಆಲಂ ಟಾಕೀಜ್ ಹತ್ತಿರ ಇರುವ ಚೋಳ ವೈನ್ಸ ಬಳಿ ಸಾರ್ವಜನಿಕ ಸ್ಥಳದಲ್ಲಿ ಒಬ್ಬ ವ್ಯಕ್ತಿ ಸಾರ್ವಜನಿಕರಿಗೆ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಮಾಹಿತಿ ಬಂದಾಗ, ಮಾಹಿತಿ ಮೇರೆಗೆ ಸ್ಥಳಕ್ಕೆ ಹೋಗಿ ಖುದ್ದಾಗಿ ಪರಿಶೀಲಿಸಿ ಬಂದಿರುವುದಾಗಿ ತಿಳಿಸಿದರು. ಈ ಬಗೆಗ ನೀಡಿದ ದೂರಿನ ಮೇರೆಗೆ ಠಾಣೆಯ ಗುನ್ನೆ ನಂ. **78/2022** ರಲ್ಲಿ ಪ್ರಕರಣವನ್ನು ದಾಖಲಿಸಿರುತ್ತೇನೆ. ದೂರನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ದೂರು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿಃ **1** ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ **1** (ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿಃ **4** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **4** (ಎ) ಎಂದು ಗುರುತಿಸಲಾಯಿತು.

ಚಾಸಾ - 5 ರವರಿಗೆ ಪಂಚರನ್ನು ಕರೆದುಕೊಂಡು ಬರುವಂತೆ ತಿಳಿಸಿದೆ. ಪಂಚರು ಬಂದಾಗ ಅವರಿಗೆ ಮಾಹಿತಿಯನ್ನು ನೀಡಿ ದಾಳಿಯ ಬಗ್ಗೆ ತಿಳಿಸಿರುತ್ತೇನೆ. ನಂತರ ಬೆಳಿಗ್ಗೆ 08.00 ಗಂಟೆಗೆ ಪಂಚರು ಮತ್ತು ಸಿಬ್ಬಂದಿಗಳೊಂದಿಗೆ ಕೃತ್ಯ ಸ್ಥಳದ ಹತ್ತಿರ ಹೋಗಿ ನಿಂತು ನೋಡಲು ಒಬ್ಬ ವ್ಯಕ್ತಿ ಸಾರ್ವಜನಿಕ ಸ್ಥಳದಲ್ಲಿ ಪ್ಲಾಸ್ಟಿಕ್ ಚೀಲದಲ್ಲಿದ್ದ ಮದ್ಯದ ಟೆಟ್ರಾ ಪ್ಯಾಕ್ ಗಳನ್ನು ತೆಗೆದು ಮಾರಾಟ ಮಾಡುತ್ತಿರುವುದು ಕಂಡು ಬಂದಿತ್ತು. ನಾವುಗಳು ದಾಳಿ ಮಾಡಿ ಸದರಿ ವ್ಯಕ್ತಿಯನ್ನು ಹಿಡಿದು ವಿಚಾರಿಸಿದಾಗ ತನ್ನ ಹೆಸರನ್ನು ತಳವಾರ ಹುಲುಗಪ್ಪ ತಂದೆ ಸಣ್ಣೆಕಪ್ಪ, ಸಾಃ ತಳವಾರಕೇರಿ, ಹೊಸಪೇಟೆ ಎಂದು ತಿಳಿಸಿದ. ಆತನ ಕೈಯಲ್ಲಿದ್ದ ಚೀಲವನ್ನು ಪರಿಶೀಲಿಸಲಾಗಿ  ಅದರಲ್ಲಿ ವಿವಿಧ ಬಗೆಯ 12.060 ಲೀಟರ್ ಮದ್ಯದ ಟೆಟ್ರಾ ಪ್ಯಾಕ್ ಗಳು ಅಂದಾಜು ಬೆಲೆ ರೂ. 4,812/- ಇದ್ದದ್ದು ಕಂಡು ಬಂದಿತ್ತು. ಆತನ ಅಂಗಶೋಧನೆ ಮಾಡಿದಾಗ ರೂ. 1,200/- ದೊರೆತವು. ಸದರಿ ಟೆಟ್ರಾ ಪ್ಯಾಕ್ ಗಳನ್ನು ಮತ್ತು ಹಣವನ್ನು ಪಂಚರ ಸಮಕ್ಷಮ ಜಪ್ತು ಪಡಿಸಿಕೊಂಡಿರುತ್ತೇನೆ.

ಸದರಿ ಪಂಚನಾಮೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಪಂಚನಾಮೆ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿಃ 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ 2 (ಇ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿಃ 3 ರ ಫೋಟೋಗಳನ್ನು  ನೋಡಿ ಗುರುತಿಸಿರುತ್ತಾರೆ.

ಕಚ್ಚಾ ನಕಾಶೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿಃ 5 ಎಂದು, ಸಾಕ್ಷಿಯ ಸಹಿಯನ್ನು ನಿಪಿಃ 5 (ಎ) ಎಂದು ಗುರುತಿಸಲಾಯಿತು.

ಪಂಚನಾಮೆಯ ನಂತರ ಆರೋಪಿಯನ್ನು ಕರೆದುಕೊಂಡು, ಮು ಮಾ ತೆಗೆದುಕೊಂಡು ಠಾಣೆಗೆ ಹಿಂತಿರುಗಿರುತ್ತೇನೆ. ಮು  ಮಾ ಗಳನ್ನು ಸ್ವತ್ತು ಪಟ್ಟಿಗೆ ಅಳವಡಿಸಿ ನ್ಯಾಯಾಲಯಕ್ಕೆ ವರದಿ ಮಾಡಿರುತ್ತೇನೆ.

**CC 1837/2022**

**ಸಿ ಡಬ್ಲೂ 10**

**ಪಿ ಡಬ್ಲೂಃ 4**

ನ್ಯಾಯಾಲಯಕ್ಕೆ ಪ್ರಥಮ ವರ್ತಮಾನ ವರದಿಯಲ್ಲಿ ಆರೋಪಿಯ ಹೆಸರು ಮತ್ತು ಮು ಮಾ ನ ಮಾಹಿತಿಯನ್ನು ಸೇರ್ಪಡೆ ಮಾಡಿಕೊಳ್ಳಲು ಕೋರಿಕೆ ಸಲ್ಲಿಸಿರುತ್ತೇನೆ. ಸಾಕ್ಷಿ ಸದರಿ ಕೋರಿಕೆ ಪತ್ರ ನೋಡಿ ಗುರುತಿಸಿದ್ದು, ಅದನ್ನು ನಿಪಿಃ **6** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **6 (ಎ)** ಎಂದು ಗುರುತಿಸಲಾಯಿತು. ಆರೋಪಿಗೆ ನೋಟಿಸ್ ಜಾರಿ ಮಾಡಿ ದಸ್ತಗಿರಿ ಕ್ರಮ ಅನುಸರಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ಸಿಬ್ಬಂದಿಗಳ ಹೇಳಿಕೆಗಳನ್ನು ಪಡೆದಿರುತ್ತೇನೆ. ಮು ಮಾ ನ್ನು ರಾಸಾಯನಿಕ ಪರೀಕ್ಷೆಗಾಗಿ ಮೇಲಾಧಿಕಾರಿಗಳ ಮೂಲಕ ಪ್ರಯೋಗಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ.

ದಿಃ **14-07-2022** ರಂದು ರಾಸಾಯನಿಕ ಪರೀಕ್ಷಾ ವರದಿ ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿ ವರದಿ ನೋಡಿ ಗುರುತಿಸಿದ್ದು, ಅದನ್ನು ನಿಪಿಃ **7** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **7(ಎ)** ಎಂದು ಗುರುತಿಸಲಾಯಿತು. ಪ್ರಕರಣದಲ್ಲಿನ ಫೋಟೋ ತೆಗೆದಿದ್ದ ಚಾಸಾ **-5** ರವರ ಕಲಂ. **65 (ಬಿ)** ಪ್ರಮಾಣ ಪತ್ರವನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿ ದಾಖಲೆ ನೋಡಿ ಗುರುತಿಸಿದ್ದು, ಅದನ್ನು ನಿಪಿಃ **8** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **8(ಎ)** ಎಂದು ಗುರುತಿಸಲಾಯಿತು.

ಆರೋಪಿ ವಿರುದ್ಧ ಸಾಕ್ಷ್ಯಾಧಾರಗಳು ಇದ್ದದ್ದರಿಂದ ಆರೋಪಿ ವಿರುದ್ಧ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಮು ಮಾ ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಮು ಮಾ **1** ರಿಂದ **3** ನ್ನು ನೋಡಿ ಗುರುತಿಸಿರುತ್ತಾರೆ.

**CC 1837/2022**

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಎನ್ ಎಸ್ ಹೆಚ್., ವಕೀಲರಿಂದ</u>**

ಅಂತಿಮ ವರದಿಯಲ್ಲಿ ಚಾಸಾ -1 ರವರು ಬೆಳಿಗ್ಗೆ 05.00 ಗಂಟೆಗೆ ಗುಡ್ ಮಾರ್ನಿಂಗ್ ಬೀಟ್ ಗೆ ಹೋಗಿದ್ದರು ಎಂದು ನಾನು ನಮೂದು ಮಾಡಿರುವುದಿಲ್ಲ. ಕೃತ್ಯದ ಬಗ್ಗೆ ಬೆಳಿಗ್ಗೆ 07.00 ಗಂಟೆಗೆ ಚಾಸಾ -1 ರವರು ಠಾಣೆಗೆ ಬಂದಾಗಲೇ ನನಗೆ ಗೊತ್ತಾಗಿರುತ್ತದೆ. ಚಾಸಾ -5 ರವರಿಗೆ ಇಂತಹ ವ್ಯಕ್ತಿಗಳನ್ನೇ ಪಂಚರನ್ನಾಗಿ ಮಾಡಲು ಕರೆದುಕೊಂಡು ಬನ್ನಿ ಎಂದು ಹೇಳಿರಲಿಲ್ಲ. ಸದರಿಯವರಿಗೆ ತೋಚಿದವರನ್ನು ಕರೆದುಕೊಂಡು ಬರಲು ತಿಳಿಸಿದ್ದೆ ಅಂದರೆ ಸರಿ. ನಾನು ಯಾವ ವಾಹನಗಳಲ್ಲಿ ಸ್ಥಳಕ್ಕೆ ಹೋಗಿದ್ದೇವು ಎಂದು, ಆ ವಾಹನಗಳ ನೋಂದಣಿ ಸಂಖ್ಯೆಗಳನ್ನು ಅಂತಿಮ ವರದಿಯಲ್ಲಿ ನಮೂದಿಸಿಲ್ಲ ಅಂದರೆ ಸರಿ. ಅಂಗಶೋಧನೆಯನ್ನು ಚಾಸಾ -4 ರವರು ಮಾಡಿರುತ್ತಾರೆ. ಸದರಿಯವರು ಅಂಗಶೋಧನೆ ಮಾಡಿರುತ್ತಾರೆ ಎಂದು ಪಂಚನಾಮೆಯಲ್ಲಿ ಬರೆದಿಲ್ಲ ಅಂದರೆ ಸರಿ. ಯಾವ ಜೇಬಿನಲ್ಲಿ ಹಣ ದೊರೆತವು ಎಂದು ಪಂಚನಾಮೆಯಲ್ಲಿ ನಮೂದು ಮಾಡಿಲ್ಲ ಅಂದರೆ ಸರಿ.

ಪಂಚನಾಮೆಯಲ್ಲಿ ಮದ್ಯದ ಟೆಟ್ರಾ ಪ್ಯಾಕ್ ಗಳ ಬ್ಯಾಚ್ ನಂಬರ್ ಗಳನ್ನು ನಮೂದು ಮಾಡಿಲ್ಲ. ನಾನು, ಸಿಬ್ಬಂದಿಗಳು ಮತ್ತು ಪಂಚರು ಆ ದಿನ ಯಾವುದೇ ಸ್ಥಳಕ್ಕೆ ಹೋಗಿರಲಿಲ್ಲ ಅಂದರೆ ಸರಿಯಲ್ಲ. ಸ್ಥಳದಲ್ಲಿ ಆರೋಪಿ ಇರಲಿಲ್ಲ ಮತ್ತು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರಲಿಲ್ಲ ಅಂದರೆ ಸರಿಯಲ್ಲ. ಪಂಚರ ಸಮಕ್ಷಮ ದಾಳಿ ಮಾಡಿ ಆರೋಪಿ ತಾಬಾದಿಂದ ಮದ್ಯ ಜಪ್ತು ಪಡಿಸಿಕೊಂಡೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ. ಪಂಚರ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ ಅಂದರೆ ಸರಿಯಲ್ಲ. ಕಚ್ಚಾ ನಕಾಶೆಗೆ ಪಂಚರ ಸಹಿಗಳನ್ನು ಪಡೆದಿರುವುದಿಲ್ಲ. ಪಂಚನಾಮೆಯನ್ನು ಮಾಡದ ಕಾರಣವೇ ಸದರಿಯವರ ಸಹಿ ಪಡೆದಿರುವುದಿಲ್ಲ ಅಂದರೆ ಸರಿಯಲ್ಲ.

**CC 1837/2022**

**ಸಿ ಡಬ್ಲೂ 10**

**ಪಿ ಡಬ್ಲೂ: 4**

ಪಂಚನಾಮೆಯನ್ನು ಮತ್ತು ನಕಾಶೆಯನ್ನು ಠಾಣೆಯಲ್ಲಿಯೇ ಕುಳಿತು ಪ್ರಕರಣಕ್ಕೆ ಅನುಕೂಲವಾಗುವಂತೆ ತಯಾರಿಸಿರುತ್ತೇನೆ ಅಂದರೆ ಸರಿಯಲ್ಲ. ಪಂಚರ ಸಮಕ್ಷಮ ಮು ಮಾ ಗಳನ್ನು ವಶಪಡಿಸಿಕೊಂಡಿಲ್ಲ ಅಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತು ಕೇಳಿ ಠಾಣೆಯ ಅಂಕಿ ಅಂಶಗಳಿಗಾಗಿ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿಕೊಂಡು ಅದಕ್ಕನುಗುಣವಾಗಿ ದಾಖಲೆಗಳನ್ನು ಸೃಷ್ಟಿಸಿ, ಸುಳ್ಳು ಅಂತಿಮ ವರದಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ- ಇಲ್ಲ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.